RNU AIR DHARWAD

**MAY 16,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಕೇಂದ್ರ ರೇಲ್ವೇ ಇಲಾಖೆ ವತಿಯಿಂದ ರಾಯಚೂರು–ಸಿಂಧನೂರು ಮಧ್ಯೆ ಒಟ್ಟು 81 ಕಿಲೋಮೀಟರ್ ಉದ್ದದ ನೂತನ ರೈಲು ಮಾರ್ಗ ನಿರ್ಮಾಣ ಯೋಜನೆಗೆ ಸಿಂಧನೂರಿನಲ್ಲಿ, ರೇಲ್ವೇ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಶಂಕುಸ್ಥಾಪನೆ ನೆರವೇರಿಸಿದರು. ಈ ಸಂದರ್ಭ ಮಾತನಾಡಿದ ಅವರು ನೂತನ ರೇಲ್ವೆ ಯೋಜನೆಯು ಒಟ್ಟು 17 ರೇಲ್ವೆ ನಿಲ್ದಾಣಗಳನ್ನು ಹೊಂದಿರಲಿದೆ. ಕಾಮಗಾರಿಯನ್ನು 3 ವರ್ಷದೊಳಗಾಗಿ ಪೂರ್ಣಗೊಳಿಸಲು ಆದೇಶ ನೀಡಲಾಗಿದೆ ಎಂದರು. ಪ್ರಧಾನ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರವು ರಾಜ್ಯದ ರೇಲ್ವೇ ಯೋಜನೆಗಳಿಗೆ 44 ಸಾವಿರ ಕೋಟಿ ರೂಪಾಯಿ ಅನುದಾನ ನೀಡಿದೆ ಎಂದು ಹೇಳಿದರು.**

<><><>

**ಬೆಳಗಾವಿ ಜಿಲ್ಲೆ ಸವದತ್ತಿ ತಾಲೂಕಿನ, ಇಂಚಲ ಗ್ರಾಮವು ಸೈನಿಕರ ತವರು ಎಂದೇ ಹೆಸರುವಾಸಿ. ಗ್ರಾಮದ 90 ಕ್ಕೂ ಅಧಿಕ ಸೈನಿಕರು ದೇಶ ಸೇವೆಗೈದು, ಸೇವಾ ನಿವೃತ್ತರಾಗಿದ್ದಾರೆ. 250 ಕ್ಕೂ ಅಧಿಕ ಸಂಖ್ಯೆಯ ಯೋಧರು ಪ್ರಸ್ತುತ, ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಇಂಚಲ ಗ್ರಾಮದ ಯಲ್ಲನಗೌಡ ಮಲ್ಲೂರು ಅವರು ಭಾರತೀಯ ಸೇನಾ ಬ್ರಿಗೇಡಿಯರ್ ಆಗಿ ಸೇವೆ ಸಲ್ಲಿಸುತ್ತಿದ್ದು, ಈ ಬಗ್ಗೆ ಪ್ರದೇಶ ಸಮಾಚಾರದೊಂದಿಗೆ ತಮ್ಮ ಅಭಿಮಾನ ವ್ಯಕ್ತಪಡಿಸಿದ್ದಾರೆ ಸೈನ್ಯಾಧಿಕಾರಿ ತಂದೆಯವರಾದ, ದೊಡ್ಡನಾಯ್ಕ ಮಲ್ಲೂರು ಅವರು..**

<><><>

**ಧ್ವನಿ: ದೊಡ್ಡನಾಯ್ಕ ಮಲ್ಲೂರ 36 ಸೆಕೆಂದುಗಳು**

<><><>

**ವೈಮಾನಿಕ ದಾಳಿ ಸಂದರ್ಭ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಸಾರ್ವಜನಿಕ ಅರಿವು ಮೂಡಿಸುವ, ಅಣಕು ಕಾರ್ಯಾಚರಣೆ ಗದಗ ನಗರದ ವಿದ್ಯಾದಾನ ಶಿಕ್ಷಣ ಕೇಂದ್ರದ ಆವರಣದಲ್ಲಿ ಜರುಗಿತು. ಪ್ರದರ್ಶನದಲ್ಲಿ ಒಟ್ಟು 22 ಇಲಾಖೆಗಳ ಪ್ರತಿನಿಧಿಗಳು ಹಾಗೂ ಎನ್.ಸಿ.ಸಿ, ಎನ್.ಎಸ್.ಎಸ್ ಸ್ವಯಂಸೇವಕರು ಹಾಗೂ ಮಾಜಿ ಸೈನಿಕರು ಪಾಲ್ಗೊಂಡಿದ್ದರು.**

<><><>

ಕೋಲಾರ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ, ವಿವಿಧ ಇಲಾಖೆಗಳ ಸಹಯೋಗದೊಂದಿಗೆ, ‘ಆಪರೇಶನ್ ಅಭ್ಯಾಸ್’ ನಾಗರಿಕ ಸುರಕ್ಷಾ ಅಣಕು ಕಾರ್ಯಾಚರಣೆ ಜರುಗಿತು.

<><><>

‘ಆಪರೇಶನ್ ಸಿಂಧೂರ’ ಯಶಸ್ಸಿನ ಹಿನ್ನೆಲೆಯಲ್ಲಿ, ರಾಷ್ಟ್ರ ರಕ್ಷಣೆಗಾಗಿ ನಾಗರಿಕರು ಎಂಬ ಧ್ಯೇಯದೊಂದಿಗೆ, ಇಂದು ಬೆಳಗ್ಗೆ, ಹುಬ್ಬಳ್ಳಿ ಮೂರುಸಾವಿರ ಮಠದ ಮೈದಾನದಿಂದ ಬೃಹತ್ ತಿರಂಗಾ ಯಾತ್ರೆ ಆಯೋಜಿಸಲಾಯಿತು. ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಮಹೇಶ ಟೆಂಗಿನಕಾಯಿ ಯಾತ್ರೆ ನೇತೃತ್ವ ವಹಿಸಿದ್ದರು.

<><><>

ಇಂದು ರಾಷ್ಟ್ರೀಯ ಡೆಂಘೀ ಸಾಂಕ್ರಾಮಿಕ ನಿರ್ಮೂಲನಾ ದಿನಾಚರಣೆ. ‘ಸಾಂಕ್ರಾಮಿಕ ಹತೋಟಿಗೆ ಜನರ ನೇತೃತ್ವ’ ಎಂಬುದು ಈ ಬಾರಿಯ ಘೋಷವಾಕ್ಯವಾಗಿದೆ. ಬಾಗಲಕೋಟೆ ಜಿಲ್ಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಜನ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಡೆಂಘೀ ಬಾಧಿತರ ಆರೈಕೆಗೆ, ಜಿಲ್ಲಾ ಆಸ್ಪತ್ರೆಯಲ್ಲಿ 10 ಹಾಸಿಗೆ, ತಾಲೂಕು ಆಸ್ಪತ್ರೆಗಳಲ್ಲಿ ತಲಾ 5 ಹಾಸಿಗೆ ಮೀಸಲಿರಿಸಲಾಗಿದ್ದು, ಅಗತ್ಯ ಔಷಧಗಳ ದಾಸ್ತಾನು ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

<><><>

ಬೀದರ್ ಜಿಲ್ಲೆಯಲ್ಲಿ ಸೋಯಾ ಅವರೆ, ತೊಗರಿ, ಉದ್ದು, ಹೆಸರು, ಜೋಳ ಸೇರಿದಂತೆ ವಿವಿಧ ಬಿತ್ತನೆ ಬೀಜಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಾದ ಜಿಯಾವುಲ್ಲಾ ಹೇಳಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ಕೃಷಿ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರೈತ ಸಂಪರ್ಕ ಕೇಂದ್ರಗಳು ಹಾಗೂ 115 ಹೆಚ್ಚುವರಿ ಕೇಂದ್ರಗಳಲ್ಲಿ ಬಿತ್ತನೆ ಬೀಜಗಳ ವಿತರಣೆ ನಡೆಯಲಿದೆ. ಈ ಬಾರಿ, ಜಿಲ್ಲೆಯಾದ್ಯಂತ ಒಟ್ಟು 4 ಲಕ್ಷದ 21 ಸಾವಿರ ಹೆಕ್ಟರ್ ಕೃಷಿ ಭೂಮಿಯಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ ಎಂದರು.

<><><>

ಗ್ರೇಟರ್ ಬೆಂಗಳೂರು ಆಡಳಿತ ಮಸೂದೆಗೆ, ರಾಜ್ಯಪಾಲರ ಅಂಕಿತ ದೊರೆತಿದ್ದು, ಕಾಯ್ದೆಯಾಗಿ, ಕೂಡಲೇ ಜಾರಿಗೊಂಡಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು ಆಗಲಿದೆ. ಕನಿಷ್ಠ ಮೂರು ಪಾಲಿಕೆ ರಚನೆಯಾಗುವ ಸಾಧ್ಯತೆಯಿದೆ. ಪ್ರಾಧಿಕಾರದ ಅಧ್ಯಕ್ಷರಾಗಿ, ಸೂಕ್ತ ಆಡಳಿತಾತ್ಮಕ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

<><><>

ಕೇಂದ್ರದ ಜಲ ಶಕ್ತಿ ಸಚಿವಾಲಯ, ಜಲ್ ಜೀವನ್ ಮಿ ’ನ್ ಅಡಿ, 2026 ರ ವೇಳೆಗೆ, ಗ್ರಾಮದ ಪ್ರತಿ ಮನೆಗೆ, ನಳದ ಮೂಲಕ ಶುದ್ಧ ಕುಡಿಯುವ ನೀರು ಒದಗಿಸಲು, ಗುರಿ ನಿಗದಿ ಪಡಿಸಿದೆ ಎಂದು, ಮೈಸೂರು ಜಿಲ್ಲಾಧಿಕಾರಿ, ಜಿ. ಲಕ್ಷ್ಮೀಕಾಂತ ರೆಡ್ಡಿ, ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>